**ಕರ್ನಾಟಕ ಪರಿಷತ್ತು**

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :** 29(239)
**ಸದಸ್ಯರ ಹೆಸರು :** ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ :** **09.12.2025**
**ಉತ್ತರಿಸುವವರು :** ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪಟ್ಟಣ ಪಂಚಾಯಿತಿಗಳಲ್ಲಿ ವಿಶ್ವಾಸ ನಕ್ಷೆ ಮತ್ತು ಫಾರಂ ನಂ-3 ನೀಡಲು ಇರುವ ಸಮಸ್ಯೆಗಳೇನು; | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಮೂನೆ -3 ವಿತರಿಸಲು ಇ-ಆಸ್ತಿ ತಂತ್ರಾಂಶವನ್ನು ಬಳಕೆಮಾಡಲಾಗುತ್ತಿದ್ದು, ವಿಶ್ವಾಸ ನಕ್ಷೆ ಜಾರಿಗೆ ತಂದಿರುವುದಿಲ್ಲ. |
| ಆ) | ಇದರಿಂದಾಗಿ ರಾಜ್ಯದ ಸಾವಿರಾರು ಜನರಿಗೆ ಭೂ-ಪರಿವರ್ತನೆಗೆ ಮತ್ತು ಕಟ್ಟಡ ನಿರ್ಮಾಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡ ಕ್ರಮಗಳೇನು; | • ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದ ವಿನ್ಯಾಸಗಳ, ಗ್ರಾಮಠಾಣಾ, ವಿವಿಧ ಯೋಜನೆಯಡಿ ಮಂಜೂರಾದ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ನೀಡಲಾಗುತ್ತಿದೆ. ಅದೇ ರೀತಿಯಲ್ಲಿ ಅಧಿಕೃತ ನಿವೇಶನ/ ಕಟ್ಟಡಗಳಿಗೆ ನಮೂನೆ -3 ಮತ್ತು ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ ಸ್ವತ್ತುಗಳಿಗೆ ನಮೂನೆ 3-A ನೀಡಲಾಗುತ್ತಿದೆ.<br>• ಕಟ್ಟಡ ಪರವಾನಿಗೆಯನ್ನು ತ್ವರಿತ ಪಾರದರ್ಶಕವಾಗಿ ನೀಡಲು "**SBPAS/ULMS** ತಂತ್ರಾಂಶವನ್ನು ಬಳಕೆ ಮಾಡಲಾಗುತ್ತಿದೆ. ಕಟ್ಟಡ ಪರವಾನಿಗೆ ಕೋರಿ ಅರ್ಕಿಟೆಕ್ಟ್ ಮುಖಾಂತರ ತಂತ್ರಾಂಶದಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ 15 ದಿನಗಳ ಒಳಗಾಗಿ ಕಟ್ಟಡ ಪರವಾನಿಗೆ ನೀಡಲಾಗುತ್ತಿದೆ. ತಂತ್ರಾಂಶವನ್ನು ಬಳಕೆ ಮಾಡುವಾಗ ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ Karnataka Municipal Data Society ಇವರ ಮೂಲಕ ಪರಿಹರಿಸಲಾಗುತ್ತಿದೆ. |
| ಇ) | ಅನುಮತಿ ತಡೆಹಿಡಿದಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಆದಾಯದ ಕೊರತೆಯಾಗುತ್ತಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? | **ಕಟ್ಟಡ ಪರವಾನಿಗೆ**<br>ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದ ವಿನ್ಯಾಸಗಳ, ಗ್ರಾಮಠಾಣಾ, ವಿವಿಧ ಯೋಜನೆಯಡಿ ಮಂಜೂರಾದ ನಿವೇಶನಗಳಲ್ಲಿ ಪರವಾನಿಗೆಯನ್ನು ಈ ಹಿಂದಿನಂತೆಯೇ ಮುಂದುವರೆಸಲಾಗಿರುತ್ತದೆ.<br>ಅನುಮೋದನೆ ಪಡೆಯದ/ಅನಧಿಕೃತ ಸ್ವತ್ತುಗಳಿಗೆ ನಮೂನೆ -3 A ನೀಡಿ, ತೆರಿಗೆ ವ್ಯಾಪ್ತಿಗೆ ಒಳಪಡಿಸಿ, ಆಸ್ತಿಕರ ವಸೂಲಿ ಮಾಡಲಾಗುತ್ತಿದೆ. ಆದರೆ, ಕಟ್ಟಡ ಪರವಾನಿಗೆ ನೀಡಲು ಪ್ರಸ್ತುತ ಅವಕಾಶವಿರುವುದಿಲ್ಲ. |

| | | |
|---|---|---|
| | | **ನಮೂನೆ -3**<br>ಇ-ಆಸ್ತಿ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಅರ್ಜಿ ಸಲ್ಲಿಸಿದ 07 ದಿನಗಳ ಒಳಗಾಗಿ ನಮೂನೆ -3 ವಿತರಿಸಲಾಗುತ್ತಿದೆ.<br>ಗಣಕೀಕೃತ ನಮೂನೆ-3 ಪಡೆಯಲು ಇ-ಖಾತಾ ಅಭಿಯಾನವನ್ನು ಹಮ್ಮಿಕೊಂಡಿದ್ದು, ಸದರಿ ಅವಧಿಯಲ್ಲಿ ಇದುವರೆಗೂ ಅಂದಾಜು ಎಂಟು ಲಕ್ಷ ಇ-ಖಾತೆಗಳನ್ನು ನೀಡಲಾಗಿದೆ. ನಮೂನೆ -3 ಪಡೆಯಲು ಕನಿಷ್ಠ ದಾಖಲೆಗಳನ್ನು ಮಾತ್ರ ನಿಗದಿಪಡಿಸಲಾಗಿದೆ.<br><br>ಖಾತಾ ಪಡೆಯಲು ಅನುಸರಿಸಬೇಕಾದ ಕ್ರಮಗಳ (ನಮೂನೆ-3ರ ಬಗ್ಗೆ) ಪೌರಾಡಳಿತ ನಿರ್ದೇಶನಾಲಯದಿಂದ ಪ್ರಮಾಣಿತ ಕಾರ್ಯವಿಧಾನ (SOP) ಹೊರಡಿಸಲಾಗಿದೆ.<br><br>ನೊಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಕಾವೇರಿ 2.0 ತಂತ್ರಾಂಶ ಮತ್ತು ಇ-ಆಸ್ತಿ ತಂತ್ರಾಂಶಗಳನ್ನು ಜೋಡಣೆ ಮಾಡಲಾಗಿದೆ. ಇದರಿಂದ ಹಕ್ಕು ವರ್ಗಾವಣೆ ವಿಧಾನವನ್ನು ಸರಳೀಕರಣಗೊಳಿಸಲಾಗಿದ್ದು, ಹಕ್ಕು ವರ್ಗಾವಣೆಯಂತೆ ಗಣಕೀಕೃತ ನಮೂನೆ-3ನ್ನು ಸುಲಭವಾಗಿ ಪಡೆಯಬಹುದಾಗಿದೆ.<br><br>ಕಟ್ಟಡ ಪರವಾನಿಗೆ ಹಾಗೂ ನಮೂನೆ -3ನ್ನು ನೀಡುತ್ತಿರುವುದರಿಂದ ನಗರ ಸ್ಥಳೀಯ ಸಂಸ್ಥೆಗಳ ಆದಾಯಕ್ಕೆ ಕೊರತೆಯಾಗಿರುವುದಿಲ್ಲ. |

**ಇ-ಸಂಖ್ಯೆ: ನಅಇ 283 ಜಿಇಎಲ್ 2025**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು.